## 17. ಗಾಜನೂರು ಡ್ಯಾಮ್ ಭರ್ತಿಗೆ ಕ್ಷಣಗಣನೆ

ಮಲೆನಾಡಿನಾದ್ಯಂತ ಸಂಜೆಯಿಂದ ಜೋರು ಮಳೆ ಸುರಿಯುತ್ತಿದ್ದು, ಶಿವಮೊಗ್ಗ ಸಮೀಪದ ಗಾಜನೂರು ಜಲಾಶಯ ಭರ್ತಿಯಾಗುವ ಹಂತದಲ್ಲಿದೆ. ಪಶ್ಚಿಮಘಟ್ಟ ವ್ಯಾಪ್ತಿ ಪ್ರದೇಶದಲ್ಲಿ ಇಡಿ ದಿನ ಸಾಧಾರಣದಿಂದ ಜೋರು ಮಳೆ ಸುರಿಯಿತು. ಅರೆ ಮಲೆನಾಡು ಪ್ರದೇಶದಲ್ಲಿ ಜಿಟಿಜಿಟಿ ಮಳೆ ಸುರಿಯಿತು. ನಿರಂತರ ಮಳೆಯಿಂದಾಗಿ ನದಿಗಳ ನೀರಿನ ಮಟ್ಟ ಏರಿಕೆಯಾಗುತ್ತಿದೆ.

ತುಂಗಾ ನದಿಗೆ ಗಾಜನೂರು ಬಳಿ ನಿರ್ಮಿಸಿರುವ ಜಲಾಶಯದ ನೀರಿನ ಮಟ್ಟ 587.57 ಮೀ.ಗೆ ತಲುಪಿದೆ. ಪೂರ್ಣಮಟ್ಟ 588.24 ಮೀ.ಗೆ ಕೇವಲ 2 ಅಡಿ ಬಾಕಿ ಇದೆ. 5 ಸಾವಿರ ಕ್ಯೂಸೆಕ್ ಒಳಹರಿವು ಇದ್ದು, ವಿದ್ಯುತ್ ಉತ್ಪಾದನೆಗೆ 4 ಸಾವಿರ ಕ್ಯೂಸೆಕ್ ನೀರು ಬಳಸಿಕೊಳ್ಳಲಾಗುತ್ತಿದೆ. ಶೃಂಗೇರಿ, ತೀರ್ಥಹಳ್ಳಿ ತಾಲ್ಲೂಕುಗಳಲ್ಲಿ ನಿರಂತರ ಮಳೆಯಾಗುತ್ತಿದೆ. ಒಳಹರಿವು ದಿಢೀರ್ ಏರಿಕೆಯಾದಲ್ಲಿ ಯಾವುದೇ ಕ್ಷಣದಲ್ಲಿ ಕ್ರಸ್ಟ್‌ಗೇಟ್‌ಗಳನ್ನು ತೆರೆದು ಹರಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿರುತ್ತಾರೆ.

ಆಧಾರ:ವಿಜಯ ಕರ್ನಾಟಕ, ದಿನಾಂಕ:18.06.2020